ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೮**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಗುರುವಾರ, ದಿನಾಂಕ: ೨೪ನೇ ಮಾರ್ಚ್, ೨೦೧೬**

---

**ಸಮೂಹ – IV**

೧. ಮುಖ್ಯಮಂತ್ರಿಗಳು

೨. ಬೆಂಗಳೂರು ನಗರ ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು

೩. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು

೪. ಗೃಹ ಸಚಿವರು

೫. ನಗರಾಭಿವೃದ್ಧಿ ಸಚಿವರು

೬. ಅಬಕಾರಿ ಮತ್ತು ಮುಜರಾಯಿ ಸಚಿವರು

---

## ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೦೬ (೮೩೯) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರಾಂಶುಪಾಲರ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ ಹಾಗೂ ಅರ್ಹತಾ ಮಾನದಂಡಗಳೇನು ;

(ಇ) ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಈ) ರಾಜ್ಯದಲ್ಲಿ ಪ್ರಾಂಶುಪಾಲರ ಹುದ್ದೆ ಹೊಂದಲು ಅರ್ಹತೆ ಇರುವ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಉ) ಪ್ರಾಂಶುಪಾಲರ ಹುದ್ದೆಗಳ ಭರ್ತಿಗೆ ಸರ್ಕಾರ ಹಾಕಿಕೊಂಡ ಕಾಲಮಿತಿ ಯಾವುದು ?

## ಪಾಲಿಕೆಯ ಮಾಲೀಕತ್ವದಲ್ಲಿರುವ ಆಸ್ತಿಗಳು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭ (೬೨೯) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು **ತಿಳಿಸುವರೆ :–**

(ಅ) ವಿಜಯಪುರ ಮಹಾನಗರ ಪಾಲಿಕೆಯ ಎಷ್ಟು ಆಸ್ತಿಗಳು ಪಾಲಿಕೆಯ ಮಾಲೀಕತ್ವದಲ್ಲಿವೆ ; ಎಷ್ಟು ಅತಿಕ್ರಮಣವಾಗಿದೆ ; (ವಿವರಗಳನ್ನು ಒದಗಿಸುವುದು)

(ಆ) ಶಾಲೆ ಹಾಗೂ ಉದ್ಯಾನವನಕ್ಕೆ ಮೀಸಲಿಟ್ಟ ಆಸ್ತಿಗಳು ಅತಿಕ್ರಮಣವಾಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಸುಪ್ರೀಂ ಕೋರ್ಟ್ ಆದೇಶದ ರೀತ್ಯಾ ಯಾವ ಉದ್ದೇಶಕ್ಕೆ ಆಸ್ತಿ ಮೀಸಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸಬೇಕೆಂಬ ಆದೇಶವಿದ್ದರೂ ಅವುಗಳನ್ನು ಸ್ಲಂ ಎಂದು ಘೋಷಣೆ ಮಾಡಿ ಖಾಸಗಿಯವರಿಗೆ ಮಾರಾಟ ಮಾಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದರೆ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ನ್ಯಾಯಾಧೀಶರುಗಳ ಹುದ್ದೆ ಬಗ್ಗೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೧೦೮ (೯೬೨) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ಮಂಜೂರಾಗಿರುವ ನ್ಯಾಯಾಧೀಶರುಗಳ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಹಾಲಿ ಉಚ್ಚ ನ್ಯಾಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ನ್ಯಾಯಾಧೀಶರುಗಳ ಸಂಖ್ಯೆ ಎಷ್ಟೆಷ್ಟು ; ಆ ಪೈಕಿ ಕರ್ನಾಟಕ ಮತ್ತು ಕರ್ನಾಟಕೇತರ ನ್ಯಾಯಾಧೀಶರುಗಳು ಯಾರು ಯಾರು ; (ಪೂರ್ಣ ವಿವರ ನೀಡುವುದು)

(ಇ) ಹಾಲಿ ಇರುವ ನ್ಯಾಯಾಧೀಶರುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತ ಹಾಗೂ ಸಾಮಾನ್ಯ ವರ್ಗಕ್ಕೆ ಸೇರಿದ ಪುರುಷ ಮತ್ತು ಮಹಿಳಾ ನ್ಯಾಯಾಧೀಶರುಗಳು ಯಾರ್‍ಯಾರು ? (ಪೂರ್ಣ ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೋಲೀಸ್ ಬಲವನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೦೯ (೮೯೧) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೋಲೀಸ್ ಬಲವನ್ನು ಹೆಚ್ಚಿಸಲು ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು ; ಪ್ರಸ್ತುತ ಜನಸಂಖ್ಯೆಗೆ ಅನುಗುಣವಾಗಿ ಇರುವ ಪೋಲೀಸರ ಸಂಖ್ಯೆ ಎಷ್ಟು ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಚೋದನಕಾರಿ ಭಾಷಣ ಮಾಡುವವರ ವಿರುದ್ಧ ಇಲಾಖೆ ಕೈಗೊಂಡಿರುವ ಕ್ರಮಗಳೇನು ; ತಡೆಯಲು ಇಲಾಖೆ ಮುಂದಿರುವ ಯೋಜನೆಗಳಾವುವು ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಮಂದಿಗೆ ವಿಶೇಷ ಭದ್ರತೆ/ಪೋಲೀಸ್ ಗನ್‌ಮ್ಯಾನ್ ನೀಡಲಾಗಿದೆ ; ಉಚಿತವಾಗಿ ನೀಡಲಾಗಿದೆಯೇ ಅಥವಾ ಸ್ವಂತ ಖರ್ಚಿನ ಮೇಲೆ ನೀಡಲಾಗಿದೆಯೇ ; (ವಿವರ ನೀಡುವುದು)

(ಈ) ಭೂಗತ ಜಗತ್ತಿನ ಚಟುವಟಿಕೆಗಳನ್ನು ನಿಯಂತ್ರಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

**ಬೆಂಗಳೂರು ಮಹಾನಗರ ಪಾಲಿಕೆ ಮಾಡಿರುವ ಸಾಲಗಳ ಕುರಿತು**

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)** –

೧೧೦ (೮೧೮) ಬೆಂಗಳೂರು ನಗರ ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆಯು ಕಳೆದ ಎರಡೂವರೆ ವರ್ಷಗಳಿಂದ ಮಾಡಿರುವ ಸಾಲಗಳೆಷ್ಟು ; ಯಾವ ಉದ್ದೇಶಕ್ಕಾಗಿ ಸಾಲ ಮಾಡಲಾಗಿರುತ್ತದೆ ; (ವಿವರಗಳನ್ನು ಒದಗಿಸುವುದು)

(ಆ) ಸಾಲ ಪಡೆಯಲು ಅಡಮಾನ ಮಾಡಿರುವ ಕಟ್ಟಡಗಳು ಎಷ್ಟು ; ಅವು ಯಾವುವು ; ಎಷ್ಟು ವರ್ಷಗಳ ಅವಧಿವರೆಗೆ ಕಟ್ಟಡ ಆಸ್ತಿ ಆಧಾರ ಮಾಡಲಾಗಿದೆ ;

(ಇ) ಈ ಸಾಲವನ್ನು ತೀರುವಳಿ ಮಾಡಲು ಅನುಸರಿಸುವ ಕ್ರಮಗಳೇನು ; ಈ ಹಿಂದೆ ಪಡೆದ ಸಾಲವನ್ನು ತೀರಿಸಲಾಗದೆ ಹೊಸ ಸಾಲ ಪಡೆಯಲು ಹಾಗೂ ಹಳೆಯ ಸಾಲ ತೀರಿಸಲು ಹೊಸ ಸಾಲಗಳನ್ನು ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ; (ವಿವರ ಒದಗಿಸುವುದು)

(ಈ) ಸಾಲಗಳನ್ನು ಯಾವ ಸಂಸ್ಥೆಗಳಿಂದ ಹಾಗೂ ಬ್ಯಾಂಕ್‌ಗಳಿಂದ ಪಡೆಯಲಾಗಿದೆ ; ಸಾಲ ಪಡೆಯಲು ಅನುಸರಿಸಿದ ನಿಯಮಗಳೇನು ; ಸಾಲ ತೀರಿಸಲು ಎಷ್ಟು ವರ್ಷ ಕಾಲಾವಧಿ ಪಡೆಯಲಾಗಿರುತ್ತದೆ ? (ವಿವರಗಳನ್ನು ನೀಡುವುದು)

## B.M.R.C.L. ನೌಕರರ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೧೧ (೯೫೫) ಬೆಂಗಳೂರು ನಗರ ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ B.M.R.C.L. ದಲ್ಲಿ ಇತ್ತೀಚೆಗೆ ಹೆಚ್ಚು ಸಿಬ್ಬಂದಿಗಳು ಕೆಲಸ ಬಿಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲ್ಲಿಯವರೆಗೆ ಎಷ್ಟು ಜನ ಸಿಬ್ಬಂದಿಗಳು ಕೆಲಸ ಬಿಟ್ಟಿರುತ್ತಾರೆ ; (ಹೆಸರು, ಹುದ್ದೆಯೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಇ) ಎಷ್ಟು ಜನ ಸಿಬ್ಬಂದಿಯ ಮೇಲೆ ನಿಗಮವು ಪೋಲೀಸ್ ಮೊಕದ್ದಮೆ ದಾಖಲು ಮಾಡಿ ದಿನಪತ್ರಿಕೆಯ ಮುಖ ಪುಟದಲ್ಲಿ ಪ್ರಕಟಿಸಿರುತ್ತದೆ ; ಈ ರೀತಿ ಸಿಬ್ಬಂದಿಯ ಮಾನವ ಹಕ್ಕುಗಳನ್ನು ಹರಣ ಮಾಡಲು ಕಾರಣಗಳೇನು ; (ದಾಖಲಾದ ಪ್ರಕರಣಗಳ ಮಾಹಿತಿ ನೀಡುವುದು)

(ಈ) ಈ ರೀತಿ ಸಿಬ್ಬಂದಿಗಳ ಮಾನವ ಹಕ್ಕುಗಳನ್ನು ಹರಣ ಮಾಡಲು ಕಾನೂನು/ ಸಂವಿಧಾನದಲ್ಲಿ ಅವಕಾಶ ಇದೆಯೇ ; ಇದರ ಸಂಬಂಧ ಯಾವ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ?

## ಆಯವ್ಯಯದಲ್ಲಿ ಹಂಚಿಕೆ ಮಾಡಲಾದ ಹಣ ಸರಿಯಾಗಿ ಬಿಡುಗಡೆಯಾಗದೆ ಇರುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೨ (೮೫೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಆಯವ್ಯಯದಲ್ಲಿ ಹಂಚಿಕೆ ಮಾಡಲಾಗುವ ಹಣ ಸಮಯಕ್ಕೆ ಸರಿಯಾಗಿ ಬಿಡುಗಡೆಯಾಗದೆ ಇರುವುದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮಾರ್ಚ್ ತಿಂಗಳಲ್ಲಿ ಆಯವ್ಯಯ ಮಂಡನೆ ಆದ ನಂತರ ಇಲಾಖಾವಾರು ಹಣಕಾಸಿನ ಹಂಚಿಕೆಯನ್ನು ಯಾವ ತಿಂಗಳಿನಲ್ಲಿ ಮಾಡಲಾಗುವುದು ;

(ಇ) ಅನುದಾನ ಬಿಡುಗಡೆ ವೇಳೆಗೆ ಸರಿಯಾಗಿ ಇಲಾಖಾವಾರು ಹಂಚಿಕೆಯಾಗದೆ ವರ್ಷದ ಅಂತ್ಯದಲ್ಲಿ ಬಿಡುಗಡೆಯಾಗುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಅನುದಾನದ ಹಂಚಿಕೆ ವಿಚಾರವಾಗಿ ತ್ರೈಮಾಸಿಕ ಹಣ ಬಿಡುಗಡೆಗೆ ವ್ಯವಸ್ಥೆ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ ?

## ಮೈಸೂರು ನಗರಕ್ಕೆ ಪ್ರತ್ಯೇಕ ಜಲಮಂಡಳಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೧೧೩. (೮೭೫) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರಕ್ಕೆ ಪ್ರತ್ಯೇಕ ಜಲಮಂಡಳಿಯನ್ನು ರಚಿಸುವಂತೆ ಮೈಸೂರು ನಗರದ ನಾಗರಿಕರು ಮತ್ತು ನಾಗರಿಕ ಸಂಘ ಸಂಸ್ಥೆಗಳು ಒತ್ತಾಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೈಸೂರು ನಗರವು ದಿನೇ ದಿನೇ ಬೆಳವಣಿಗೆಯನ್ನು ಹೊಂದುತ್ತಿರುವುದರಿಂದ, ವಾಣಿವಿಲಾಸ ವಾಟರ್ ವರ್ಕ್ಸ್‌ನ್ನು ಮೇಲ್ದರ್ಜೆಗೇರಿಸಿ, ಸ್ವತಂತ್ರವಾಗಿ ಮೈಸೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ರಚಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ;

(ಇ) ಮೈಸೂರು ನಗರಕ್ಕೆ ಪ್ರತ್ಯೇಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ರಚಿಸಲು ಸರ್ಕಾರಕ್ಕೆ ಇರುವ ಅಡೆತಡೆಗಳೇನು ?

## ಬಿಡಿಎ ನೂತನ ಬಡಾವಣೆಗಳ ಮೂಲ ಸೌಕರ್ಯಗಳ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೪ (೯೬೧) ಬೆಂಗಳೂರು ನಗರ ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಕಳೆದ ೧೦ ವರ್ಷಗಳಲ್ಲಿ ನಿರ್ಮಿಸಲಾದ ನೂತನ ಬಡಾವಣೆಗಳ ಸಂಖ್ಯೆಗಳು ಎಷ್ಟು ;

(ಆ) ನೂತನ ಬಡಾವಣೆಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ನೀರು, ವಿದ್ಯುತ್ ರಸ್ತೆ, ಒಳಚರಂಡಿ ಇನ್ನಿತರೆ ಅಗತ್ಯ ಮೂಲಸೌಕರ್ಯ ಒದಗಿಸಲಾಗಿದೆಯೇ ; ಒದಗಿಸಿದ್ದಲ್ಲಿ, ಆ ಕುರಿತು ಮಾಹಿತಿ ಒದಗಿಸುವುದು ?

## ಸರ್ಕಾರದ ಬೊಕ್ಕಸಕ್ಕೆ ನಷ್ಟ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೫ (೯೬೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜೆಮ್ಸ್ ಮತ್ತು ಆಭರಣ ಕೈಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ಕಳೆದ ೩ ವರ್ಷಗಳಿಂದ ಬಂದಿರುವ ಆದಾಯವೆಷ್ಟು ;

(ಆ) ತೆರಿಗೆ ವಂಚನೆ ಮಾಡಿರುವವರ ಸಂಖ್ಯೆ ಎಷ್ಟು ; ಹಾಗೂ ಅವರ ಮೇಲೆ ಕೈಗೊಂಡಿರುವ ಕ್ರಮವೇನು ;

(ಇ) ಕಳೆದ ೨೦ ದಿನಗಳಿಂದ ಚಿನ್ನ–ಬೆಳ್ಳಿ ವರ್ತಕರು ನಡೆಸುತ್ತಿರುವ ಮುಷ್ಕರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಮುಷ್ಕರದಿಂದ ಸರ್ಕಾರದ ಬೊಕ್ಕಸಕ್ಕೆ ಎಷ್ಟು ನಷ್ಟವಾಗಿದೆ ;

(ಉ) ಬೆಂಗಳೂರು ನಗರದಲ್ಲಿ ವಾರ್ಷಿಕ ನಡೆಯುತ್ತಿರುವ ತೆರಿಗೆ ವಹಿವಾಟುದಾರರ ಸಂಖ್ಯೆ ಎಷ್ಟು ; ಹಾಗೂ ಇವರಿಂದ ಪ್ರತಿ ವರ್ಷ ಬರುತ್ತಿರುವ ಆದಾಯವೆಷ್ಟು ;

(ಊ) ಬೆಂಗಳೂರು ನಗರದಲ್ಲಿರುವ ಒಟ್ಟು ಆಭರಣ ಮಳಿಗೆಗಳ ಸಂಖ್ಯೆ ಎಷ್ಟು ;

(ಋ) ರಾಜ್ಯದಲ್ಲಿರುವ ಒಟ್ಟು ಆಭರಣ ಮಳಿಗೆಗಳ ಸಂಖ್ಯೆ ಎಷ್ಟು ?

## ಬೆಂಗಳೂರು ಮಹಾನಗರ ಯೋಜನಾ ಸಮಿತಿ ಬಗ್ಗೆ ಮತ್ತು ರಸ್ತೆ ಡಾಂಬರೀಕರಣದ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೬. (೯೩೮) ಬೆಂಗಳೂರು ನಗರ ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಯೋಜನೆ ಸಮಿತಿಯನ್ನು ಯಾವಾಗ ರಚನೆ ಮಾಡಲಾಯಿತು ; ಸಮಿತಿಯಲ್ಲಿ ಇರುವ ಸದಸ್ಯರು ಯಾರು ಯಾರು ; ನಗರ ಯೋಜನಾ ಸಮಿತಿ ಎಷ್ಟು ಬಾರಿ ಸಭೆ ನಡೆಸಿದೆ ;

(ಆ) ಬೆಂಗಳೂರು ಮಹಾನಗರದ ಭವಿಷ್ಯದ ಅಭಿವೃದ್ಧಿಗಾಗಿ ನಗರ ಸಮಗ್ರ ಅಭಿವೃದ್ಧಿ ಯೋಜನೆ ಸಭೆ ನಡೆಸಲಾಗಿರುವುದೇ ; ಯಾವಾಗ ನಡೆಸಲಾಯಿತು ; ನಡೆದಿದ್ದರೆ, ಸಭೆಯ ಸಿ.ಡಿ.ಪಿ. ಬಗ್ಗೆ ಮಾಹಿತಿ ಒದಗಿಸುವುದು ;

(ಇ) ವಿಜಯನಗರ ವಿಧಾನ ಸಭಾ ಕ್ಷೇತ್ರದ ಬಾಪೂಜಿನಗರ, ಗಾಳಿ ಆಂಜನೇಯ ವಿಭಾಗ ಹಾಗೂ ದೀಪಾಂಜಲಿನಗರ ವಿಭಾಗಗಳಲ್ಲಿ ರಸ್ತೆಗಳಿಗೆ ಡಾಂಬರೀಕರಣ ಹಾಗೂ ಕಾಂಕ್ರೀಟ್ ರಸ್ತೆಗಳಿಗಾಗಿ ೨೦೧೪–೧೫ ರಲ್ಲಿ ಬಿಡುಗಡೆ ಮಾಡಿದ ಹಣವೆಷ್ಟು ; ಯಾವ ಯಾವ ರಸ್ತೆಗಳಿಗೆ ಕಾಂಕ್ರೀಟ್ ಹಾಗೂ ಡಾಂಬರೀಕರಣ ಮಾಡಲು ಗುರುತಿಸಲಾಗಿತ್ತು ; ಇದುವರೆವಿಗೂ ಯಾವ ಯಾವ ರಸ್ತೆಗಳಿಗೆ ಡಾಂಬರೀಕರಣ ಮಾಡಲಾಗಿದೆ ; ಯಾವಾಗ ಮಾಡಲಾಗಿದೆ ? (ವಾರ್ಡ್‌ವಾರು ರಸ್ತೆಗಳ ವಿವರ ನೀಡುವುದು)

## ವಕೀಲರಿಗೆ ಸ್ಟೈಫಂಡ್ ನೀಡುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೧೭ (೮೨೦) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರತಿ ವರ್ಷ ಎಷ್ಟು ಜನ ವಕೀಲರುಗಳು ಬಾರ್ ಕೌನ್ಸಿಲಿನಲ್ಲಿ ರಿಜಿಸ್ಟ್ರೇಷನ್ ಮಾಡಿಸಿ ವಕೀಲ ಸನದು ಪಡೆಯುತ್ತಿದ್ದಾರೆ ; (ಮೂರು ವರ್ಷದ ವಿವರ ನೀಡುವುದು)

(ಆ) ಬಾರ್ ಕೌನ್ಸಿಲ್‌ನಿಂದ ಸನದು ಪಡೆದ ನಂತರ ಪ್ರತಿಯೊಬ್ಬ ವಕೀಲರುಗಳಿಗೆ ಪ್ರತಿ ತಿಂಗಳು ಐದು ಸಾವಿರದಂತೆ ಮೂರು ವರ್ಷ ಸ್ಟೈಫಂಡ್ ಕೊಟ್ಟಲ್ಲಿ ಸರ್ಕಾರದ ಮೇಲೆ ಎಷ್ಟು ಆರ್ಥಿಕ ಹೊಣೆ ಬೀಳುವುದು ;

(ಇ) ಎಂ.ಬಿ.ಬಿ.ಎಸ್. ಆದ ಪದವೀಧರರು ಪೋಸ್ಟ್ ಗ್ರಾಜ್ಯುವೇಶನ್ ಮಾಡುವ ಕಾಲಕ್ಕೆ ಎಲ್ಲಾ ಸಮಾಜದ ವಿದ್ಯಾರ್ಥಿಗಳಿಗೆ ಸ್ಟೈಫಂಡ್ ಕೊಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಪೋಸ್ಟ್ ಗ್ರಾಜ್ಯುವೇಶನ್ ಮಾಡುವ ಕಾಲಕ್ಕೆ ಎಂ.ಬಿ.ಬಿ.ಎಸ್. ಆದ ಪದವೀಧರರಿಗೆ ಸ್ಟೈಫಂಡ್ ಕೊಟ್ಟಂತೆ ಎಲ್ಲಾ ಜಾತಿಯ ವಕೀಲರಿಗೂ ಸಹ ಮೂರು ವರ್ಷಗಳ ಕಾಲ ಸ್ಟೈಫಂಡ್ ಕೊಡಲಾಗುವುದೇ :

(ಉ) ರಾಜ್ಯದಲ್ಲಿ ಹೆಚ್ಚಿನ ಕಾನೂನು ಕಾಲೇಜುಗಳು ಅನುದಾನ ರಹಿತವಾಗಿದ್ದು, ಸರ್ಕಾರ ಆ ಕಾಲೇಜುಗಳಿಗೆ ಏನೂ ಸಹಾಯ ಮಾಡದೇ ಇರುವುದರಿಂದ ವಿದ್ಯಾರ್ಥಿಗಳು ಹೆಚ್ಚಿನ ಶುಲ್ಕ ಕೊಟ್ಟು ಕಲಿಯುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹೀಗಾಗಿ ಕಾನೂನು ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಆಗಿ ಕಾಲೇಜುಗಳು ಮುಚ್ಚುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಹಾಗಿದ್ದಲ್ಲಿ, ಸ್ಟೈಫಂಡ್ ಕೊಡಲು ಕ್ರಮ ಕೈಗೊಳ್ಳಲಾಗುವುದೇ ?

## ಆರ್ಥಿಕ ಇಲಾಖೆಯಿಂದ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೧೮ (೯೬೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾಲಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ವಿವಿಧ ಇಲಾಖೆಗಳ ಅಡಿ ಬರುವ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಸರ್ಕಾರದ ನೀತಿ ಏನು ; ಪ್ರಸಕ್ತ ಯಾವ ಯಾವ ಇಲಾಖೆಯಿಂದ ಶಾಲಾ ಕಾಲೇಜುಗಳಿಗೆ ಅನುದಾನ ಕೋರಿ ಬಂದಿರುವ ಪ್ರಸ್ತಾವನೆಗಳಿಗಾಗಿ ಸಂಪುಟ ಉಪ ಸಮಿತಿ ರಚಿಸಿ ಪರಿಶೀಲಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ಪ್ರತಿಯೊಂದರ ವಿವರ ಕೊಡುವುದು ;

(ಆ) ೧೯೮೭ ರಿಂದ ೧೯೯೫ರ ಮಧ್ಯದಲ್ಲಿ ಆರಂಭಿಸಿರುವ ಶಾಲಾ ಕಾಲೇಜುಗಳಿಗೆ ಅನುದಾನ ಒದಗಿಸುವ ನಿಟ್ಟಿನಲ್ಲಿ ಸರ್ಕಾರದ ನೀತಿ ಏನು ; ಹಾಗೂ ಈ ನಿಟ್ಟಿನಲ್ಲಿ ಸರ್ಕಾರ ಎದುರಿಸುತ್ತಿರುವ ಸಮಸ್ಯೆ ಏನು ;

(ಇ) ಸರ್ಕಾರಿ ನೌಕರರಿಗೂ ಅನುದಾನಿತ ಸಿಬ್ಬಂದಿಗೂ ಹಲವು ಹಣಕಾಸು ಸೌಲಭ್ಯಗಳಲ್ಲಿ ಹಾಗೂ ಸೇವಾ ಸೌಲಭ್ಯಗಳಲ್ಲಿ ವ್ಯತ್ಯಾಸಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರಿಪಡಿಸಲು ಸರ್ಕಾರದ ಕ್ರಮ ಏನು ?

## ಅಬಕಾರಿ ಆದಾಯದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೯ (೯೧೯) ಅಬಕಾರಿ ಮತ್ತು ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷಗಳಲ್ಲಿ ಅಬಕಾರಿ ಮೂಲದಿಂದ ಸರ್ಕಾರಕ್ಕೆ ಪಾವತಿಯಾಗಿರುವ ಹಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಸರ್ಕಾರಕ್ಕೆ ಬರಬೇಕಾಗಿದ್ದ ಬಾಕಿ ಮೊತ್ತವೆಷ್ಟು ;

(ಇ) ಬರಬೇಕಾದ ಬಾಕಿ ಮೊತ್ತವನ್ನು ವಸೂಲು ಮಾಡಲು ಕೈಗೊಂಡಿರುವ ಕ್ರಮವೇನು ;

(ಈ) ಬಾಕಿ ವಸೂಲಿ ಮಾಡಲು ಸರ್ಕಾರ ಕಾಲಮಿತಿಯನ್ನೇನಾದರೂ ಹಾಕಿಕೊಂಡಿದೆಯೇ ;

(ಉ) ರಾಜ್ಯದ ಸಹಾಯ ಗುತ್ತಿಗೆದಾರರಿಂದ ಕಳೆದ ಮೂರು ವರ್ಷಗಳಿಂದ ಸರ್ಕಾರಕ್ಕೆ ಬಂದಿರುವ ಹಣವೆಷ್ಟು ಹಾಗೂ ಬಾಕಿ ಬರಬೇಕಾಗಿರುವ ಹಣವೆಷ್ಟು ; (ಗುತ್ತಿಗೆದಾರರ ಹೆಸರು ಬಾಕಿ ಮೊತ್ತ ಹಾಗೂ ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು)

(ಊ) ಈ ಬಾಕಿಯನ್ನು ವಸೂಲಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ರಾಜ್ಯದಲ್ಲಿ ಹೊಸ ಪೊಲೀಸ್ ಠಾಣೆ ನಿರ್ಮಾಣ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೦ (೯೪೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಹೊಸ ಪೊಲೀಸ್ ಠಾಣೆಗಳನ್ನು ನಿರ್ಮಾಣ ಮಾಡಲಾಗಿದೆ ;

(ಆ) ಹೊಸ ಪೊಲೀಸ್ ಠಾಣೆಗಳನ್ನು ನಿರ್ಮಾಣ ಮಾಡಲು ನಿಗದಿಪಡಿಸಿರುವ ಅನುದಾನ ಎಷ್ಟು ;

(ಇ) ರಾಜ್ಯದಲ್ಲಿ ಅಪರಾಧ ಚಟುವಟಿಕೆಗಳು ಹೆಚ್ಚಾಗುತ್ತಿದ್ದು ನಾಗರಿಕರು ಆತಂಕಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಈ ಅಪರಾಧ ಚಟುವಟಿಕೆಗಳನ್ನು ತಡೆಗಟ್ಟಲು/ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಉ) ೨೦೧೫-೧೬ನೇ ಸಾಲಿನಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ? (ಠಾಣೆವಾರು ಸಂಪೂರ್ಣ ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 1094 - ಪಿ5